# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ತುಂಗಾ ಮೇಲ್ದಂಡೆ ಯೋಜನಾ ನಂ.04, ಹಾವೇರಿ ಕಛೇರಿಯನ್ನು ಬ್ಯಾಡಗಿ ತಾಲ್ಲೂಕಿಗೆ ಸ್ಥಳಾಂತರಿಸುವ ಬಗ್ಗೆ.

**ಓದಲಾಗಿದೆ:**

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರ ಪತ್ರ ಸಂಖ್ಯೆ:ಕನೀನಿ:ಸಿ-8:324:ಎಎಸ್‌ಟಿ:2019/20/5474 ದಿನಾಂಕ: 20.11.2019.

2. ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ ರವರ ಪತ್ರ ಸಂಖ್ಯೆ: ಕರ್ನಾಟಕ ನೀರಾವರಿ ನಿಗಮ ನಿಯಮಿತ:ಕೇಕ:ಸಿ--8:324:ಎಎಸ್‌ಟಿ:2019/20/6040, ದಿನಾಂಕ:20.12.2019.

*****

## ಪ್ರಸ್ತಾವನೆ:

1. ಮೇಲೆ (1)ರಲ್ಲಿ ಓದಲಾದ ದಿನಾಂಕ: 20.11.2019ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು ಸರ್ಕಾರಕ್ಕೆ ಸಲ್ಲಿಸಿದ ಪ್ರಸ್ತಾವನೆಯಲ್ಲಿ ಮುಖ್ಯ ಇಂಜಿನಿಯರ್ ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ ಇವರು ಕೋರಿರುವಂತೆ ಕಾರ್ಯಪಾಲಕ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನೆ, ರಾಣಿಬೆನ್ನೂರು ಇವರ ಅಧೀನದಲ್ಲಿ ಬರುವ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ತುಂಗಾ ಮೇಲ್ದಂಡೆ ಯೋಜನಾ ಉಪವಿಭಾಗ ನಂ.04, ಹಾವೇರಿ ಕಛೇರಿಯ ವ್ಯಾಪ್ತಿಯಲ್ಲಿ ಬ್ಯಾಡಗಿ ತಾಲ್ಲೂಕಿಗೆ ಸಂಬಂಧಿಸಿದ 1) ಗುಡ್ಡದ ಮಲ್ಲಾಪುರ ಏತ ನೀರಾವರಿ ಯೋಜನೆ, 2) ಕಾಗಿನೆಲೆ ಏತ ನೀರಾವರಿ ಯೋಜನೆ 3) ಅಸುಂಡಿ ಏತ ನೀರಾವರಿ ಯೋಜನೆ, ಅಣೂರು ಹಾಗೂ ಸುತ್ತಮುತ್ತಲಿನ ಕೆರೆ ತುಂಬಿಸುವ ಯೋಜನೆ, ಬುಡ್ಡಪ್ಪನ ಹಳ್ಳಿ ಸುತ್ತಮುತ್ತಲಿನ ಕೆರೆ ತುಂಬಿಸುವ ಯೋಜನೆ, ಟೆಂಡರ್ ಕರೆಯುವ ಹಂತದಲ್ಲಿದ್ದು, ಸದರಿ ಯೋಜನೆಗಳನ್ನು ತ್ವರಿತವಾಗಿ ಹಾಗೂ ಸಮರ್ಪಕವಾಗಿ ಅನುಷ್ಠಾನಗೊಳಿಸಲು ಹಾವೇರಿ ಉಪ ವಿಭಾಗ ಕಛೇರಿಯನ್ನು ಬ್ಯಾಡಗಿ ಕೇಂದ್ರ ಸ್ಥಾನವನ್ನಾಗಿರಿಸಿ ಸ್ಥಳಾಂತರಿಸಲು ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ತುಂಗಾ ಮೇಲ್ದಂಡೆ ಯೋಜನಾ ಉಪ ವಿಭಾಗ ನಂ.04, ಹಾವೇರಿ ಕಛೇರಿಯನ್ನು ಬ್ಯಾಡಗಿ ಕೇಂದ್ರ ಸ್ಥಾನವನ್ನಾಗಿರಿಸಿ ಹುದ್ದೆ ಸಮೇತ ಸ್ಥಳಾಂತರಿಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

2. ಮೇಲೆ (2)ರಲ್ಲಿ ಓದಲಾದ ದಿನಾಂಕ: 20.12.2019ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ತುಂಗಾ ಮೇಲ್ದಂಡೆ ಯೋಜನಾ ನಂ.04, ಹಾವೇರಿ ಕಛೇರಿಯನ್ನು ಬ್ಯಾಡಗಿ ತಾಲ್ಲೂಕಿನಲ್ಲಿ ಯಾವುದಾದರೂ ಬಾಡಿಗೆ ಕಟ್ಟಡಕ್ಕೆ ಸ್ಥಳಾಂತರಿಸಲಾಗುವುದು ಹಾಗೂ ಬಾಡಿಗೆ ವೆಚ್ಚವನ್ನು ಸಾದಿಲ್ವಾರು ವೆಚ್ಚದಲ್ಲಿ ಭರಿಸಲಾಗುವುದು ಹಾಗೂ ವಾರ್ಷಿಕ ಅಂದಾಜು ವೆಚ್ಚ ರೂ 1,54,000/- (ಒಂದು ಲಕ್ಷದ ಐವತ್ತ ನಾಲ್ಕು ಸಾವಿರ ರೂ.ಗಳು ಮಾತ್ರ) ಎಂದು ಅಂದಾಜಿಸಲಾಗಿದ್ದು, ಹಾಲಿ ಕಛೇರಿಯ ಪೀಠೋಪಕರಣಗಳನ್ನೇ ಬಳಸಲಾಗುವುದು ಎಂದು ತಿಳಿಸುತ್ತಾ ಪ್ರಸ್ತುತ ಕೈಗೆತ್ತಿಕೊಂಡಿರುವ ಕಾಮಗಾರಿಗಳಲ್ಲಿ ಬಾಕಿ ಉಳಿದಿರುವ ಕಾಮಗಾರಿಗಳನ್ನು ಸದರಿ ಉಪ ವಿಭಾಗಕ್ಕೆ ಅನುಷ್ಠಾನಗೊಳಿಸಿ ಪೂರ್ಣಗೊಳಿಸಲಾಗುತ್ತದೆ ಎಂದು ತಿಳಿಸಿರುತ್ತಾರೆ.

27-2-2020.

3. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ತುಂಗಾ ಮೇಲ್ದಂಡೆ ಯೋಜನಾ ಉಪ ವಿಭಾಗ ನಂ.04, ಹಾವೇರಿ ಕಛೇರಿಯ ಸಿಬ್ಬಂದಿ ವಿವರ ಕೆಳಕಂಡಂತಿದೆ.

| ಕ್ರ.ಸಂ | ಹುದ್ದೆಯ ಪದನಾಮ | ಮಂಜೂರಾದ ಹುದ್ದೆ | ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆ |
|---|---|---|---|
| 1. | ಸಹಾಯಕ ಕಾರ್ಯಪಾಲಕ ಇಂಜಿನಿಯರ್ | 1 | 1 |
| 2. | ಸಹಾಯಕ ಇಂಜಿನಿಯರ್ | 4 | 3 |
| 3. | ಕಿರಿಯ ಇಂಜಿನಿಯರ್ | 3 | 3 |
| 4. | ಪ್ರಥಮ ದರ್ಜೆ ಸಹಾಯಕರು | 1 | 1 |
| 5. | ದ್ವಿತೀಯ ದರ್ಜೆ ಸಹಾಯಕರು | 2 | 0 |
| 6. | ಬೆರಳಚ್ಚುಗಾರರು | 1 | 0 |
| 7. | ವಾಹನ ಚಾಲಕ | 1 | 0 |
| 8. | ಜವಾನರು | 2 | 1 |
| 9. | ಕಾವಲುಗಾರರು | 1 | 1 |
| 10. | ಒಟ್ಟು | 16 | 10 |

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 180 ಎಸ್ ಎ ಎಸ್ 2019 (ಇ),ದಿನಾಂಕ:27.02.2020**

4. ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ ಇದರ ಅಧೀನದಲ್ಲಿ ಬರುವ ಕಾರ್ಯಪಾಲಕ ಅಭಿಯಂತರರು, ತುಂಗಾ ಮೇಲ್ದಂಡೆ ಯೋಜನೆ, ರಾಣಿಬೆನ್ನೂರು ವಿಭಾಗದಡಿ ಬರುವ **"ಸಹಾಯಕ ಕಾರ್ಯಪಾಲಕ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ಉಪವಿಭಾಗ ನಂ.04, ಹಾವೇರಿ ಕಛೇರಿಯನ್ನು ಆಡಳಿತ ಹಿತದೃಷ್ಠಿಯಿಂದ ಮಂಜೂರಾದ ಹುದ್ದೆಗಳೊಂದಿಗೆ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಸಮೇತ ಬ್ಯಾಡಗಿ ಕೇಂದ್ರ ಸ್ಥಾನವನ್ನಾಗಿರಿಸಿ ಬ್ಯಾಡಗಿ ತಾಲ್ಲೂಕಿಗೆ ಈ ಕೆಳಕಂಡ ಷರತ್ತಿಗೆ ಒಳಪಟ್ಟು ಸ್ಥಳಾಂತರಿಸಿ ಆದೇಶಿಸಿದೆ".**

| ಕ್ರ.ಸಂ | ಹುದ್ದೆಯ ಪದನಾಮ | ಮಂಜೂರಾದ ಹುದ್ದೆ | ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆ |
|---|---|---|---|
| 1. | ಸಹಾಯಕ ಕಾರ್ಯಪಾಲಕ ಇಂಜಿನಿಯರ್ | 1 | 1 |
| 2. | ಸಹಾಯಕ ಇಂಜಿನಿಯರ್ | 4 | 3 |
| 3. | ಕಿರಿಯ ಇಂಜಿನಿಯರ್ | 3 | 3 |
| 4. | ಪ್ರಥಮ ದರ್ಜೆ ಸಹಾಯಕರು | 1 | 1 |
| 5. | ದ್ವಿತೀಯ ದರ್ಜೆ ಸಹಾಯಕರು | 2 | 0 |
| 6. | ಬೆರಳಚ್ಚುಗಾರರು | 1 | 0 |
| 7. | ವಾಹನ ಚಾಲಕ | 1 | 0 |
| 8. | ಜವಾನರು | 2 | 1 |
| 9. | ಕಾವಲುಗಾರರು | 1 | 1 |
| 10. | ಒಟ್ಟು | 16 | 10 |

27-2-2020

**ಷರತ್ತುಗಳು:**

1. ಪ್ರಸ್ತುತ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ನಂ.04, ಹಾವೇರಿ ಉಪವಿಭಾಗದಡಿ ಕೈಗೆತ್ತಿಕೊಂಡಿರುವ ಕಾಮಗಾರಿಗಳನ್ನು ಬ್ಯಾಡಗಿಗೆ ಸ್ಥಳಾಂತರಿಸಿದ ನಂತರ ಸದರಿ ಉಪವಿಭಾಗೀಯ ಕಛೇರಿಯಿಂದಲೇ ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸತಕ್ಕದ್ದು.
2. ಬಾಡಿಗೆ ವೆಚ್ಚವನ್ನು ಸಾದಿಲ್ವಾರು ವೆಚ್ಚದಲ್ಲಿ ಭರಿಸುವುದು ಹಾಗೂ ವಾರ್ಷಿಕ ಅಂದಾಜು ವೆಚ್ಚ ರೂ 1,54,000/- (ಒಂದು ಲಕ್ಷದ ಐವತ್ತ ನಾಲ್ಕು ಸಾವಿರ ರೂ.ಗಳು ಮಾತ್ರ) ಮಿತಿಯಲ್ಲಿಯೇ ಭರಿಸತಕ್ಕದ್ದು.

5. ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 14 ಆಕೋ-1/2020(ಇ-ಆಫೀಸ್) ದಿನಾಂಕ: 02.02.2020ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

27.2.2020

(ಕೆ.ಎಲ್. ಪ್ರಸಾದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸೇವೆಗಳು-ಎ)

27/02

**ಇವರಿಗೆ:**

1. ಪ್ರಧಾನ ಮಹಾಲೇಖಾಪಾಲರು (ಜಿ&ಎಸ್.ಎಸ್.ಎ)/ (ಈ &ಆರ್.ಎಸ್.ಎ)/ (ಎ&ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಆನಂದರಾವ್ ವೃತ್ತ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ನಿರ್ವಹಣಾ ಉನ್ನತ ಕೇಂದ್ರ (ಎ.ಸಿ.ಐ.ಡಬ್ಲ್ಯೂ.ಆರ್.ಎಂ.), ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ, ಬೆಂಗಳೂರು/ಧಾರವಾಡ.
5. ವ್ಯವಸ್ಥಾಪಕ ನಿರ್ದೇಶಕರು, ಕಾನೀನಿನಿ, ಬೆಂಗಳೂರು/ಮೈಸೂರು.
6. ವ್ಯವಸ್ಥಾಪಕ ನಿರ್ದೇಶಕರು, ಕೃಭಾಜನಿನಿ, ಬೆಂಗಳೂರು/ಆಲಮಟ್ಟಿ.
7. ವ್ಯವಸ್ಥಾಪಕ ನಿರ್ದೇಶಕರು, ವಿಜನಿನಿ, ಬೆಂಗಳೂರು/ಚಿತ್ರದುರ್ಗ.
8. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ(ದಕ್ಷಿಣ), ಬೆಂಗಳೂರು.
9. ನಿರ್ದೇಶಕರು, ಕಾಡಾ, ಬೆಂಗಳೂರು.
10. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ.
11. ಎಲ್ಲಾ ಮುಖ್ಯ ಇಂಜಿನಿಯರ್‌ಗಳು, ಜಲಸಂಪನ್ಮೂಲ ಇಲಾಖೆ.
12. ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ.
13. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್. ಹಾವೇರಿ.
14. ವಿಶೇಷ ಭೂಸ್ವಾಧೀನಾಧಿಕಾರಿಗಳು, ಹಾವೇರಿ ಜಿಲ್ಲೆ.
15. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು.
16. ಹೆಚ್ಚುವರಿ ನಿರ್ದೇಶಕರು ಹಾಗೂ ಕಾರ್ಯಕಾರಿ ಮುಖ್ಯಸ್ಥರು ಖಜಾನೆ-2, ಖಾಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 009.\

17. ಮಾನ್ಯ ಜಲಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
18. ನಿರ್ದೇಶಕರು, ಜಿಯೋಮೆಟ್ರಿಕ್ ಕೇಂದ್ರ, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು(ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು).
19. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
20. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
21. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ(ಸೇವೆಗಳು), ವಿಕಾಸಸೌಧ, ಬೆಂಗಳೂರು.
22. ಸರ್ಕಾರದ ಉಪ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಸೇವೆಗಳು), ವಿಧಾನಸೌಧ, ಬೆಂಗಳೂರು.
23. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿ.
24. ಕಾರ್ಯಪಾಲಕ ಅಭಿಯಂತರರು, ತುಂಗಾ ಮೇಲ್ದಂಡೆ ಯೋಜನೆ, ರಾಣಿಬೆನ್ನೂರು.